ಹುಕ್ಕೇರಿ ಹಿರೇಮಠದ ಶಾಖೆಯಲ್ಲಿ ಪ್ರದಾನ

# ಸ್ವರ್ಣವಲ್ಲೀ ಶ್ರೀಗಳಿಗೆ 'ಗೀತಾಭಿಯಾನಾರ್ಣವ' ಬಿರುದು

ಪ್ರಜಾವಾಣಿ ವಾರ್ತೆ

**ಬೆಳಗಾವಿ:** ಇಲ್ಲಿನ ಹುಕ್ಕೇರಿ ಹಿರೇಮಠದ ಶಾಖೆಯಲ್ಲಿ ಮಂಗಳವಾರ ನಡೆದ ಕಾರ್ಯಕ್ರಮದಲ್ಲಿ ಸೋಂದಾ ಸ್ವರ್ಣವಲ್ಲೀ ಮಹಾಸಂಸ್ಥಾನದ ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಅವರಿಗೆ 'ಗೀತಾಭಿಯಾನಾರ್ಣವ' ಬಿರುದು ಪ್ರದಾನ ಮಾಡಲಾಯಿತು.

ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ, 'ಗಂಗಾಧರೇಂದ್ರ ಸರಸ್ವತೀ ಸ್ವಾಮೀಜಿ ಭಗವದ್ಗೀತೆ ಅಭಿಯಾನವನ್ನು ರಾಜ್ಯವಿಡೀ ನಡೆಸುವ ಮೂಲಕ ಮನೆ ಮಾತಾಗಿದ್ದಾರೆ. ಸನಾತನ ಧರ್ಮದ ಬಗ್ಗೆ ಶ್ರೀಗಳು ಸಮಾಜದಲ್ಲಿ ಅರಿವು ಮೂಡಿಸುತ್ತಿದ್ದಾರೆ. ಹಿಂದೂ ಧರ್ಮದಲ್ಲಿನ ಎಲ್ಲ ಸಂಪ್ರದಾಯದ ಮಠಗಳು ಒಂದಾಗಿ, ಸನಾತನ ಸಂಸ್ಕೃತಿ ಎತ್ತಿಹಿಡಿದರೆ ಮಾತ್ರ ಭಾರತಕ್ಕೆ ಭವಿಷ್ಯವಿದೆ' ಎಂದರು.

ಗಂಗಾಧರೇಂದ್ರ ಸರಸ್ವತೀ ಶ್ರೀಗಳು, 'ಎಲ್ಲ ಸಂಪ್ರದಾಯದ ಮಠಗಳೂ ಒಂದಾಗಬೇಕು. ಅದೇ ಸಮನ್ವಯ. ಭಾರತದಲ್ಲಿ ಹುಟ್ಟಿದಷ್ಟು ಧರ್ಮಗಳು, ಆಧ್ಯಾತ್ಮಿಕ ಚಿಂತನೆಗಳು ಬೇರೆಲ್ಲೂ ಹುಟ್ಟಿಲ್ಲ. ಭಾರತ ಅಖಂಡವಾಗಬೇಕಾದರೆ ಮತ್ತು ಇಲ್ಲಿನ ಸಮಸ್ಯೆ ನಿವಾರಣೆಯಾಗಬೇಕಾದರೆ, ಎಲ್ಲ ಧಾರ್ಮಿಕ ಸಂಪ್ರದಾಯಗಳೂ ಒಂದಾಗಬೇಕು' ಎಂದರು.

'ಭಗವದ್ಗೀತೆ ಅಭಿಯಾನಕ್ಕೆ ವೀರಶೈವ ಮಠಗಳಿಂದಲೂ ಉತ್ತಮ ಸಹಕಾರ ಸಿಗುತ್ತಿದೆ. ಹುಕ್ಕೇರಿ ಹಿರೇಮಠವೂ ಸಹಕರಿಸಿದೆ' ಎಂದರು.

ಹಿರೇಮಠದ ಗುರುಕುಲದ 150 ವೇದವಟುಗಳು, 50 ಮಹಿಳೆಯರು ಭಗವದ್ಗೀತೆ ಪಠಿಸಿದರು. ಅಭಿಯಾನ ಸಮಿತಿಯ ಕಾರ್ಯಾಧ್ಯಕ್ಷ ಪರಮೇಶ್ವರ ಹೆಗಡೆ, ಕಾರ್ಯದರ್ಶಿ ಎಂ.ಕೆ. ಹೆಗಡೆ, ಗಣೇಶ ಹೆಗಡೆ, ವೆಂಕಟ್ರಮಣ ಹೆಗಡೆ ಇದ್ದರು. ಸುಬ್ರಹ್ಮಣ್ಯ ಭಟ್ ನಿರೂಪಿಸಿದರು.



ಬೆಳಗಾವಿಯ ಹುಕ್ಕೇರಿ ಹಿರೇಮಠದ ಶಾಖೆಯಲ್ಲಿ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರು ಗಂಗಾಧರೇಂದ್ರ ಸರಸ್ವತೀ ಶ್ರೀಗಳಿಗೆ 'ಗೀತಾಭಿಯಾನಾರ್ಣವ' ಬಿರುದು ಪ್ರದಾನ ಮಾಡಿದರು